ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1732/2018

ಚಾಸಾ:4 ಪ್ರಾಸಾ:4

ದಿನಾಂಕ: 22.04.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀಮತಿ ಸುಶೀಲ |
| ಗಂಡನ ಹೆಸರು | : | ಉಮೇಶ್ ಜೋಗಿ |
| ವಯಸ್ಸು | : | 54 ವರ್ಷ |
| ಉದ್ಯೋಗ | : | ವ್ಯವಹಾರ |
| ವಾಸ ಸ್ಥಳ | : | ಹೊಂಬಾಡಿ ಮಂಡಾಡಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿಯ ಪರಿಚಯವಿಲ್ಲ. ಮೃತ ಸಂಕು ಪೂಜಾರ್ತಿಯವರಿಗೆ ಹುಣ್ಸೆಮಕ್ಕಿಯಲ್ಲಿ 5-6 ವರ್ಷಗಳ ಹಿಂದೆ ನಮ್ಮ ಅಂಗಡಿಯಿಂದ 100 ಮೀಟರ್ ದೂರದಲ್ಲಿ ಅಪಘಾತವಾಗಿರುತ್ತದೆ. ಅಲ್ಲಿ ಜನರು ಸೇರಿದ್ದರು. ಎಲ್ಲರೂ ಉಪಚರಿಸಿ ಆಕೆಯನ್ನು ಆಸ್ಪತ್ರೆಗೆ ಕಳುಹಿಸಿರುತ್ತೇವೆ. ನಿಪಿ-5 ರಲ್ಲಿ ವಾಹನವನ್ನು ನೋಡಿ ಗುರುತಿಸಿಲ್ಲ. ಘಟನೆ ಬಗ್ಗೆ ಪೊಲೀಸರು ನನ್ನನ್ನು ವಿಚಾರಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ಭಾಗಶಃ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ಹುಣ್ಸೆಮಕ್ಕಿಯಲ್ಲಿ ನಮ್ಮ ಶ್ರೀದೇವಿ ಫ್ಯಾನ್ಸಿ ಸ್ಟೋರ್ ಎಂಬ ಅಂಗಡಿ ಇದೆ ಎಂದರೆ ಸರಿ. ಅಪಘಾತದ ಸದ್ದು ಕೇಳಿ ನಾನು ಹೊರಗೆ ಬಂದಿರುತ್ತೇನೆ ಎಂದರೆ ಸರಿ. ದಿ: 02-02-2018 ರಂದು ಅಪಘಾತವಾಗಿರುವುದು ಎಂದರೆ ತಿಳಿದಿಲ್ಲ. ಸದ್ರಿ ದಿನ 4 ಗಂಟೆಗೆ ಅಪಘಾತವಾಗಿರುತ್ತದೆ ಎಂದರೆ ತಿಳಿದಿಲ್ಲ. ಸಂಕು ಪೂಜಾರ್ತಿರವರು ಹುಣ್ಸೆಮಕ್ಕಿ ಮಾರ್ಕೇಟು ಬಳಿ ನಡೆದುಕೊಂಡು ಹೋಗುತ್ತಿದ್ದಾಗ

ಎದುರಿನಿಂದ ಬರುತ್ತಿದ್ದ ಆರೋಪಿ ತನ್ನ ಬಾಬ್ತು ಕೆಎ-20-ಜಡ್-0762 ವಾಹನವನ್ನು ಅತೀ ವೇಗ ಹಾಗೂ ಅಜಾಗರೂಕತೆಯಿಂದ ತೀರ ಬಲಕ್ಕೆ ಚಲಾಯಿಸಿಕೊಂಡು ಬಂದು ಎದುರಿನಿಂದ ಡಿಕ್ಕಿ ಹೊಡೆದ ಪರಿಣಾಮ ಆಕೆಗೆ ತೀವ್ರ ಸ್ವರೂಪದ ಗಾಯಗಳಾಗಿದ್ದು ಸಂಜೆ 7-55ಕ್ಕೆ ಮೃತಪಟ್ಟಿರುತ್ತಾರೆ ಎಂದರೆ ಸಾಕ್ಷಿಯು ಅಪಘಾತ ಹೇಗೆ ಆಯಿತು ಎಂದು ತನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

ನಾನು ಅಪಘಾತದ ಪ್ರತ್ಯಕ್ಷದರ್ಶಿ ಎಂದರೆ ಸರಿಯಲ್ಲ. ನಾನು ಮತ್ತು ಸ್ಥಳೀಯರು ಆಕೆಯನ್ನು ಉಪಚರಿಸಿ ಆಕೆಯನ್ನು ಆಸ್ಪತ್ರೆಗೆ ದಾಖಲಿಸಿರುತ್ತೇವೆ ಎಂದರೆ ಸರಿ. ಸದ್ರಿ ಅಪಘಾತವನ್ನು ನಾನು ನೋಡಿದ್ದು ಆರೋಪಿಯ ಅತೀ ವೇಗ ನಿರ್ಲಕ್ಷ್ಯತನದ ಚಾಲನೆಯಿಂದ ಅಪಘಾತ ಸಂಭವಿಸಿ ಸಂಕು ಪೂಜಾರ್ತಿರವರು ಮೃತಪಡಲು ಕಾರಣವಾಗಿದ್ದರೂ ನನಗೆ ಪ್ರಕರಣದ ಮಾಹಿತಿ ಇದ್ದರೂ ಆರೋಪಿ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಇದೇ ವಿಚಾರವಾಗಿ ನಾನು ದಿ 03-08-2018 ರಂದು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-9 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಕೆ ಸಿ ಎಸ್ ರವರಿಂದಃ**

ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**